# ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 03 ಬಿಇಎಂ 2020 (ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ: 30.03.2021.

## ಸುತ್ತೋಲೆ

ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಲು 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿತ್ತು.

ಆಡಳಿತ ಇಲಾಖೆಗಳು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂಬಂಧ ದಿನಾಂಕ 06.07.2020ರ ಸುತ್ತೋಲೆಯಿಂದ ವಿನಾಯಿತಿಯನ್ನು ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸಿದ್ದವು. ಅಂತಹ ಪ್ರಸ್ತಾವನೆಗಳ ಪೈಕಿ ಕೆಲವು ಪ್ರಸ್ತಾವನೆಗಳಿಗೆ ಮುಂದಿನ ಆರ್ಥಿಕ ವರ್ಷ ಅಂದರೆ, 2021-22ನೇ ಸಾಲಿನಲ್ಲಿ, ದಿನಾಂಕ: 01-04-2021ರ ನಂತರ ನೇಮಕಾತಿ ಅದೇಶ ನೀಡಲು ಸಹಮತಿ ನೀಡಲಾಗಿದೆ ಎಂದು ತಿಳಿಸಲಾಗಿತ್ತು.

ಈ ರೀತಿ ತಿಳಿಸಲಾದ ಪ್ರಸ್ತಾವನೆಗಳನ್ನು ದಿನಾಂಕ: 01.04.2021ರ ನಂತರ ಆರ್ಥಿಕ ಇಲಾಖೆಯ ಮರುಪರಿಶೀಲನೆಗೆ ಸಲ್ಲಿಸುವಂತೆ ಆಡಳಿತ ಇಲಾಖೆಗಳಿಗೆ ತಿಳಿಸಲಾಗಿದೆ. ಅಂದರೆ, 2021-22ನೇ ಸಾಲಿನಲ್ಲಿ ಆರ್ಥಿಕ ಇಲಾಖೆಯ ಸಹಮತಿ ಪಡೆದೇ ನೇಮಕಾತಿ ಆದೇಶ ನೀಡಲು ಆಡಳಿತ ಇಲಾಖೆಗಳಿಗೆ ತಿಳಿಸಲಾಗಿದೆ.

Ekroop Caur 30/3
(ಡಾ. ಏಕ್‌ರೂಪ್ ಕೌರ್)
ಸರ್ಕಾರದ ಕಾರ್ಯದರ್ಶಿ(ಆ&ಸಂ)
ಆರ್ಥಿಕ ಇಲಾಖೆ

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
5. ಎಲ್ಲಾ ನಿಗಮ/ಮಂಡಳಿಗಳ ಮುಖ್ಯಸ್ಥರು.
6. ಆರ್ಥಿಕ ಇಲಾಖೆಯ ವಿಶೇಷ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು/ವಿಶೇಷಾಧಿಕಾರಿಗಳು/ಶಾಖಾಧಿಕಾರಿಗಳು
7. ಹೆಚ್ಚುವರಿ ಪ್ರತಿಗಳು.